ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	881
ಮಾನ್ಯ ಸದಸ್ಯರ ಹೆಸರು	ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	28-9-2020
ಉತ್ತರಿಸುವ ಸಚಿವರು	ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
1	ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ 100 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಸರ್ಕಾರಿ ಆಸ್ಪತ್ರೆಯ ಹೆಚ್ಚುವರಿ ಕಟ್ಟಡವನ್ನು ನಿರ್ಮಿಸಲು ಶಂಕು ಸ್ಥಾಪನೆ ನೆರವೇರಿಸಲಾಗಿತ್ತೆ;	ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ 100 ಕೋಟಿ ರೂಪಾಯಿಗಳ ವೆಚ್ಚದಲ್ಲಿ 450 ಹಾಸಿಗೆಯ ಹೆಚ್ಚುವರಿ ಆಸ್ಪತ್ರೆ ಕಟ್ಟಡ ನಿರ್ಮಿಸಲು ದಿನಾಂಕ:27-1-2020 ರಂದು ಶಂಕು ಸ್ಥಾಪನೆಯನ್ನು ನೆರವೇರಿಸಲಾಗಿರುತ್ತದೆ.
2	ಹಾಗಿದ್ದಲ್ಲಿ, ಸದರಿ ಕಟ್ಟಡ ಕಾಮಗಾರಿಗೆ ಹಣ ಬಿಡುಗಡೆ ಮಾಡಲಾಗಿದೆಯೇ; ಇದುವರೆಗೂ ಎಷ್ಟು ಹಣ ಬಿಡುಗಡೆಯಾಗಿದೆ;	ಸದರಿ ಕಟ್ಟಡ ಕಾಮಗಾರಿಗೆ ಇದುವರೆಗೂ ರೂ. 10.00 ಕೋಟಿ ಬಿಡುಗಡೆಯಾಗಿದೆ.
3	ಸದರಿ ಕಾಮಗಾರಿಯು ಯಾವ ಹಂತದಲ್ಲಿದೆ ಹಾಗೂ ಯಾವ ಕಾಲಮಿತಿಯೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಿ, ಲೋಕಾರ್ಪಣೆಗೊಳಿಸಲಾಗುವುದು?	ಹೊಸ ಆಸ್ಪತ್ರೆ ಕಟ್ಟಡ ನಿರ್ಮಿಸುವ ಉದ್ದೇಶಿತ ಜಾಗದಲ್ಲಿ ಹಳೆ ಕಟ್ಟಡಗಳಿದ್ದು, ಸದರಿ ಕಟ್ಟಡಗಳನ್ನು ನೆಲಸಮ ಮಾಡಿ ಅವಶೇಷಗಳನ್ನು ತೆರವುಗೊಳಿಸಿ ವಿಲೇವಾರಿ ಮಾಡಿ ಜಾಗವನ್ನು ಸಮತಟ್ಟು ಮಾಡಲಾಗಿರುತ್ತದೆ. ಸದರಿ ಕಾಮಗಾರಿಯನ್ನು ಕೈಗೊಂಡು ಮುಕ್ತಾಯಗೊಳಿಸಲು ಗುತ್ತಿಗೆ ಕರಾರಿನಲ್ಲಿ 24 ತಿಂಗಳು ಕಾಲಾವಧಿಯನ್ನು ನಿಗದಿಪಡಿಸಲಾಗಿರುತ್ತದೆ.

ಆಕುಕ 129 ಎಸ್.ಎಂ.ಎಂ. 2020

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು